ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1019
2. ಸದಸ್ಯರ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 21.09.2021
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಸಕ್ಕರೆ ನಿರ್ದೇಶನಾಲಯ ಕಛೇರಿ ಎಲ್ಲಿದೆ; ಇದನ್ನು ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ:	ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಛೇರಿಯು 5ನೇ ಮಹಡಿ, ಎಫ್ ಬ್ಲಾಕ್, ಸಿಬಿಎಬಿ ಸಂಕೀರ್ಣ, ಕೆಹೆಚ್‌ಬಿ ಕಟ್ಟಡ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು ಇಲ್ಲಿ ಇರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: ಪಿಡಿ 75 ಯೋಪರ 2018 ದಿನಾಂಕ: 10.01.2019 ಮತ್ತು ದಿನಾಂಕ: 23.09.2019ರಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯವನ್ನು ಬೆಂಗಳೂರಿನಿಂದ ಬೆಳಗಾವಿಗೆ ಸ್ಥಳಾಂತರಿಸಲು ಅಧಿಸೂಚಿಸಲಾಗಿದೆ.
(ಆ)	ಹಾಗಿದ್ದಲ್ಲಿ ಏಕೆ ಮತ್ತು ಎಲ್ಲಿಗೆ ಸ್ಥಳಾಂತರಿಸಲಾಗುವುದು; (ತಿಳಿಸುವುದು)	ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಯನ್ನು ತೀವ್ರಗೊಳಿಸಲು ಹಾಗೂ ಆ ಭಾಗದ ಸಾರ್ವಜನಿಕರಿಗೆ ರಾಜ್ಯದ ಆಡಳಿತವು ಹತ್ತಿರವಾಗಲು ಕರ್ನಾಟಕ ಸರ್ಕಾರದ ವಿವಿಧ ಇಲಾಖೆ/ ನಿಗಮ/ಮಂಡಳಿಗಳನ್ನು ಉತ್ತರ ಕರ್ನಾಟಕ ಭಾಗಕ್ಕೆ ಸ್ಥಳಾಂತರಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಪಿಡಿ 75 ಯೋಪರ 2018 ದಿನಾಂಕ: 10.01.2019ರಲ್ಲಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯು ಅಧಿಸೂಚಿಸಿರುತ್ತದೆ. ಇದರಲ್ಲಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯವನ್ನು ಬೆಂಗಳೂರಿನಿಂದ ಬೆಳಗಾವಿಗೆ ಸ್ಥಳಾಂತರಿಸಲು ಸೇರ್ಪಡೆಗೊಳಿಸಲಾಗಿರುತ್ತದೆ.
(ಇ)	ಬೆಂಗಳೂರಿನಲ್ಲಿ ಉಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)	ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಲ್ಲಿ ಕಾರ್ಯಭಾರವು ಕಡಿಮೆ ಇರುವುದರಿಂದ ಹಾಗೂ ಸಿಬ್ಬಂದಿಗಳ ಕೊರತೆ ಇರುವುದರಿಂದ ಹಾಗೂ ಅನ್ಯ ಇಲಾಖೆಗಳಿಂದ ನಿಯೋಜನೆ ಮೇಲೆ ಗುರುತಿಸಿರುವ ಹುದ್ದೆಗಳಲ್ಲಿ ಬಹುತೇಕ ಹುದ್ದೆಗಳು ಇದುವರೆವಿಗೂ ಭರ್ತಿಯಾಗದೇ ಇರುವುದರಿಂದ ಹೆಚ್ಚುವರಿಯಾಗಿರುವ 19 ಹುದ್ದೆಗಳನ್ನು ರದ್ದುಗೊಳಿಸಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯವನ್ನು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ವಿಲೀನಗೊಳಿಸುವ ಪ್ರಸ್ತಾವನೆಯನ್ನು, ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮ/ಮಂಡಳಿಗಳಲ್ಲಿರುವ ಹೆಚ್ಚುವರಿ ಹುದ್ದೆಗಳನ್ನು ರದ್ದುಗೊಳಿಸುವುದು ಮತ್ತು ಕೆಲವು ಇಲಾಖೆಗಳನ್ನು ವಿಲೀನಗೊಳಿಸುವ ಸಂಬಂಧ ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಚಿವ ಸಂಪುಟ ಉಪಸಮಿತಿಗೆ ಸಲ್ಲಿಸಲು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ದಿನಾಂಕ:07.02.2020ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯವನ್ನು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ವಿಲೀನಗೊಳಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿಯನ್ನು ನೀಡಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾನಿಯಮಗಳು)ಯು ನೀಡಿದ ಅಭಿಪ್ರಾಯದನುಸಾರ ವಿಲೀನ ಪ್ರಕ್ರಿಯೆಯನ್ನು ಜರುಗಿಸುವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಈ ಮಧ್ಯೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಪಿಡಿ 75 ಯೋಪರ 2018 ದಿನಾಂಕ:10.01.2019ರಲ್ಲಿ ಅಧಿಸೂಚಿಸಿದ ರಾಜ್ಯ ಸರ್ಕಾರದ ಇಲಾಖೆ/ನಿಗಮ/ಮಂಡಳಿಗಳನ್ನು ಉತ್ತರ ಕರ್ನಾಟಕ ಭಾಗಕ್ಕೆ ಸ್ಥಳಾಂತರಿಸಲು ವಿಳಂಬವಾಗುತಿರುವುದನ್ನು ಪ್ರಶ್ನಿಸಿ, ಶ್ರೀಮತಿ ಸುಧಾ ಕಾಟ್ವಾ ಇವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ: 35374/2019 (ಪಿಐಎಲ್)ಅನ್ನು ಮತ್ತು ಅಧ್ಯಕ್ಷರು, ಉತ್ತರ ಕರ್ನಾಟಕ ಅಭಿವೃದ್ಧಿ ಸಂಘ ಇವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ: 5563/2021(ಪಿಐಎಲ್) ಅನ್ನು ದಾಖಲಿಸಿರುತ್ತಾರೆ. ಸದರಿ ರಿಟ್ ಅರ್ಜಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುತ್ತವೆ.

.....2

<table>
<tr>
<td>(ಈ)</td>
<td>ರಾಜ್ಯದಲ್ಲಿ ಎಷ್ಟು ಕಬ್ಬು ಸಂಶೋಧನಾ ಕೇಂದ್ರಗಳಿವೆ (ವಿವರ ನೀಡುವುದು)</td>
<td>ರಾಜ್ಯದಲ್ಲಿ 04 ಕಬ್ಬು ಸಂಶೋಧನಾ ಕೇಂದ್ರಗಳಿದ್ದು ವಿವರಗಳು ಈ ಕೆಳಕಂಡಂತಿವೆ.
<table>
<tr><th>ಕ್ರ. ಸಂ</th><th>ವಿಶ್ವವಿದ್ಯಾಲಯ / ಸಂಸ್ಥೆಯ ಹೆಸರು</th><th>ಕೇಂದ್ರದ ಹೆಸರು</th><th>ಸ್ಥಳ</th></tr>
<tr><td>1.</td><td>ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು</td><td>ವಲಯ ಕೃಷಿ ಸಂಶೋಧನಾ ಕೇಂದ್ರ,</td><td>ವಿ.ಸಿ.ಫಾರಂ ಮಂಡ್ಯ</td></tr>
<tr><td>2.</td><td>ಕೃಷಿ ವಿಶ್ವವಿದ್ಯಾಲಯ, ಧಾರವಾಡ</td><td>ಕೃಷಿ ಸಂಶೋಧನಾ ಕೇಂದ್ರ,</td><td>ಸಂಕೇಶ್ವರ</td></tr>
<tr><td>3.</td><td colspan="2">ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ,</td><td>ಬೆಳಗಾವಿ</td></tr>
<tr><td>4.</td><td colspan="2">ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ</td><td>ಮಂಡ್ಯ</td></tr>
</table>
</td>
</tr>
<tr>
<td>(ಉ)</td>
<td>ಮಂಡ್ಯದ ಡಾ.ಸರ್. ಎಂ. ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಕೇಂದ್ರ (ಕಬ್ಬು)ಕ್ಕೆ ಪ್ರತ್ಯೇಕ ನಿರ್ದೇಶಕರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td>ಬಂದಿದೆ</td>
</tr>
<tr>
<td>(ಊ)</td>
<td>ಈ ಸಂಶೋಧನಾ ಕೇಂದ್ರಕ್ಕೆ ಪ್ರತ್ಯೇಕ ನಿರ್ದೇಶಕರನ್ನು ನೇಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ತಿಳಿಸುವುದು)</td>
<td>ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲು ಹಾಗೂ ಇತರೆ ಚಟುವಟಿಕೆಗಳನ್ನು ಕೈಗೊಳ್ಳಲು ಹಣಕಾಸಿನ ಕೊರತೆಯುಂಟಾಗುತ್ತಿರುವ ಹಿನ್ನಲೆಯಲ್ಲಿ ಮಂಡ್ಯದ ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆಯನ್ನು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ವಿಲೀನಗೊಳಿಸಿ, ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ತಾಂತ್ರಿಕ ಸಿಬ್ಬಂದಿಗಳನ್ನು ಬಳಸಿಕೊಂಡು ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆಯಲ್ಲಿ ಸಂಶೋಧನಾ ಚಟುವಟಿಕೆಗಳನ್ನು ನಡೆಸಲು ದಿನಾಂಕ: 21.06.2019ರಂದು ಜರುಗಿದ ಮಂಡ್ಯದ ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆಯ ವಾರ್ಷಿಕ ಸರ್ವ ಸಾಧಾರಣ ಮಹಾಸಭೆಯಲ್ಲಿ ತೀರ್ಮಾನಿಸಲಾಗಿದೆ. ದಿನಾಂಕ: 19.11.2020ರಂದು ಜರುಗಿದ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಆಡಳಿತ ಮಂಡಳಿಯ 52ನೇ ಆಡಳಿತ ಮಂಡಳಿಯ ಸಭೆಯಲ್ಲಿ ಮತ್ತು ದಿನಾಂಕ: 11.01.2021ರಂದು ಜರುಗಿದ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ 14ನೇ ವಾರ್ಷಿಕ ಸರ್ವ ಸಾಧಾರಣ ಮಹಾಸಭೆಯಲ್ಲಿ ಸದರಿ ತೀರ್ಮಾನವನ್ನು ಅನುಮೋದಿಸಲಾಗಿರುತ್ತದೆ.

ಅದರಂತೆ, ಮಂಡ್ಯದ ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆಯನ್ನು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ವಿಲೀನಗೊಳಿಸುವ ಕುರಿತ ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಜ್ಞಾಪನಪತ್ರದ ತಿದ್ದುಪಡಿಯನ್ನು ಸಹಕಾರ ಸಂಘಗಳ ಉಪ ನಿಬಂಧಕರು, ಬೆಳಗಾವಿ ಜಿಲ್ಲೆ ಇವರು ದಿನಾಂಕ: 19.02.2021ರಂದು ಅನುಮೋದಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಮಂಡ್ಯದ ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆಯ ಲಾಭ – ನಷ್ಟದ ಅಡಾವೆಪತ್ರವನ್ನು ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಅಡಾವೆಪತ್ರದಲ್ಲಿ ಪರಿಗಣಿಸಲು ಮತ್ತು ಸದರಿ ಸಂಸ್ಥೆಗಳ ವಿಲೀನ ಪ್ರಕ್ರಿಯೆಗಳನ್ನು ಕೈಗೊಳ್ಳಲಾಗುತ್ತಿದೆ. ಆದ್ದರಿಂದ, ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆಗೆ ಪ್ರತ್ಯೇಕ ನಿರ್ದೇಶಕರನ್ನು ನೇಮಿಸುವ ಅವಶ್ಯಕತೆ ಇರುವುದಿಲ್ಲ.</td>
</tr>
</table>

ಸಂಖ್ಯೆ: ಸಿಐ 273 ಸಿಒಎಫ್ 2021

(ಶಂಕರ್.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು.